ದಿನಾಂಕ 04-07-2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ : ವಾದಿ ಪರ ಶ್ರೀ. ಎ.ಎನ್.ಆರ್. ವಕೀಲರಿಂದ

ನನ್ನ ಮುಖ್ಯ ವಿಚಾರಣೆ ಭಾಗವಾಗಿ ಪ್ರಮಾಣ ಪತ್ರದ ಮೂಲಕ ನ್ಯಾಯಾಲಯದ ಮುಂದೆ ಸಲ್ಲಿಸಿರುತ್ತೇನೆ. ಸದರಿ, ಪ್ರಮಾಣ ಪತ್ರದಲ್ಲಿ ಬರೆದಿರುವ ವಿಷಯಗಳು ನಾನೇ ಬರೆಸಿರುತ್ತೇನೆ. ನನ್ನ ಪ್ರಮಾಣ ಪತ್ರದಲ್ಲಿ ಹೇಳಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ. ಅದರಲ್ಲಿರುವ ಸಹಿ ನನ್ನದೇ. ನನ್ನ ದಾವೆಗೆ ಪೂರಕವಾಗಿ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ, ಅವುಗಳನ್ನು ಗುರುತಿಸುವಂತೆ ಕೋರುತ್ತೇನೆ.

1. ಮುಟೇಶನ್ ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿ.ಪಿ. 1 ಎಂದು ಗುರುತಿಸಲಾಯಿತು.

2. 21 ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ಕ್ರಮವಾಗಿ ನಿ.ಪಿ. 2 ರಿಂದ 22 ಎಂದು ಗುರುತಿಸಲಾಯಿತು.

3. ನಮ್ಮ ತಾಯಿಯ ಮೂಲ ಆಧಾರ್ ಕಾರ್ಡ್‌ನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿ.ಪಿ. 23 ಎಂದು ಗುರುತಿಸಲಾಯಿತು.

ಆದ್ದರಿಂದ ನಾನು ಸಲ್ಲಿಸಿದ ದಾವೆಯನ್ನು ಡಿಕ್ರಿ ಮಾಡುವಂತೆ ಕೋರುತ್ತೇನೆ.

ಪಾಟೀ ಸವಾಲು : ಶ್ರೀ. ವಿ.ಪಿ. ವಕೀಲರ ಕೋರಿಕೆಯ ಮೇರೆಗೆ ಪಾಟೀ ಸವಾಲು ಮುಂದೂಡಲಾಯಿತು.

(ನನ್ನ ಉಕ್ತದ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿರುತ್ತಾರೆ)

ಓ. ಹೇ. ಕೇ. ಸರಿ ಇದೆ,

**ಸಿಜೆ** & ಜೆಎಂಎಫ್‌ಸಿ, ನ್ಯಾಯಾಲಯ, ಮಾನವಿ.